ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ಸಮಗ್ರ ಚಲನಚಿತ್ರ ನೀತಿ ಅನುಷ್ಠಾನದ ಕುರಿತು

ಡಾ|| ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು ) :-

738 (1016) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕನ್ನಡ ಚಿತ್ರರಂಗದ ಸಮಗ್ರ ಚಲನಚಿತ್ರ ನೀತಿ ವರದಿ ಸರ್ಕಾರಕ್ಕೆ ನೀಡಲಾಗಿದೆಯೇ ;

(ಆ) ಈ ವರದಿಯ ಸಮಗ್ರ ನೀತಿಯನ್ನು ಅನುಷ್ಠಾನಕ್ಕೆ ತರಲಾಗಿದೆಯೇ;

(ಇ) 1975ರ ನಂತರ ಹೊಸ ಬಡಾವಣೆಗಳಲ್ಲಿ ಚಿತ್ರಮಂದಿರ ನಿರ್ಮಾಣಕ್ಕೆ ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆಯೇ ; ಹಾಗಿದ್ದಲ್ಲಿ ವಿವರ ನೀಡುವುದು ;

(ಈ) ಸಾರ್ವಜನಿಕರಿಗೆ ಅನುಕೂಲವಾಗುವಂತೆ ವಸತಿ ಬಡಾವಣೆಗಳಲ್ಲಿ ಚಿತ್ರಮಂದಿರ ನಿರ್ಮಾಣಗೊಳ್ಳಲು ಸರ್ಕಾರ ಚಿಂತಿಸಿದೆಯೇ ; ಚಿಂತಿಸಿದ್ದಲ್ಲಿ, (Commercial zone) ಎಂಬ ಪದವನ್ನು ವಿನಾಯಿತಿ ನೀಡಿ, ಚಿತ್ರಮಂದಿರ ನಿರ್ಮಾಣವಾಗಲು ಸರ್ಕಾರ ಯೋಚಿಸಿದೆಯೇ ?